ಜೆಎಸ್ಎಸ್ ಮಹಾವಿದ್ಯಾಪೀಠ

ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–293

**24 ಸೆಪ್ಟೆಂಬರ್ 2022 * ಶನಿವಾರ * ಸಂಜೆ 6.00**

**ಸ್ಥಳ: ರಾಜೇಂದ್ರ ಭವನ, ಜೆಎಸ್ಎಸ್ ಆಸ್ಪತ್ರೆ ಆವರಣ, ಮೈಸೂರು**

---

ದಿವ್ಯ ಆಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

ಅಧ್ಯಕ್ಷತೆ

**ಶ್ರೀ ಮ.ಗು. ಸದಾನಂದಯ್ಯ**

ನಿವೃತ್ತ ಉಪ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮೈಸೂರು

ಉಪನ್ಯಾಸ

**ಡಾ. ಕೆ. ಅನಂತರಾಮು**

ವಿಶ್ರಾಂತ ಪ್ರಾಧ್ಯಾಪಕರು, ಮೈಸೂರು

**ವಿಷಯ : ಶಿವಶರಣೆಯರ ವಚನಗಳು**

ವಚನ ಗಾಯನ

**ಕು. ಎನ್. ಚೂಡಾಮಣಿ**

ಮೈಸೂರು

---

ಪ್ರಾಯೋಜಕರು

**ಶ್ರೀಮತಿ ಎಂ.ಎ. ನೀಲಾಂಬಿಕಾ**

ನಿವೃತ್ತ ಉಪನ್ಯಾಸಕರು

# 242, ಉತ್ತರಾದಿ ಮಠದ ರಸ್ತೆ, ಖಿಲ್ಲೆ ಮೊಹಲ್ಲಾ, ಮೈಸೂರು 570 004

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಸಂಸ್ಥೆಗಳ ಮೂಲಕ ಧರ್ಮದಾಸೋಹ ವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996 ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಮ.ಗು. ಸದಾನಂದಯ್ಯನವರು** ಶಿಕಾರಿಪುರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆ ಆರಂಭಿಸಿದರು. ನಂತರ ಶಿರಾಳಕೊಪ್ಪ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದ ಬಳಿಕ ಧಾರವಾಡ, ವಿಜಯಪುರ, ಕಾರವಾರ, ಬೆಳಗಾವಿ, ಮೈಸೂರು ಮುಂತಾದ ಕಡೆಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಪ್ರಸ್ತುತ ಮೈಸೂರು ನಗರ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

**ಡಾ. ಕೆ. ಅನಂತರಾಮುರವರು** ಕನ್ನಡ, ಹಿಂದಿ ಹಾಗೂ ಭಾಷಾ ವಿಜ್ಞಾನ ವಿಷಯಗಳಲ್ಲಿ ಮೊದಲನೇ ಸ್ಥಾನ ಮತ್ತು ಶ್ರೇಣಿಯೊಂದಿಗೆ ಎಂಎ ಪದವಿಗಳನ್ನು ಹಾಗೂ ಜೈನಶಾಸ್ತ್ರದಲ್ಲಿ ಪಿಎಚ್‌ಡಿ ಪಡೆದಿದ್ದಾರೆ. ಮೈಸೂರು ವಿಶ್ವವಿದ್ಯಾನಿಲಯದ ಸಂಜೆ ಕಾಲೇಜಿನಲ್ಲಿ ಕನ್ನಡ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ್ದಾರೆ. ಉದಯರವಿಯ ನಾಡಿನಲ್ಲಿ, ಸಕ್ಕರೆಯ ಸೀಮೆ, ದಕ್ಷಿಣದ ಸಿರಿನಾಡು, ದೇವರ ದಾಸಿಮಯ್ಯ, ಅಜಾತ ನಾಗಲಿಂಗಸ್ವಾಮಿ, ಯುಗಪುರುಷ ಮೌನೇಶ್ವರ, ಶ್ರೀಗುರು ದತ್ತಾತ್ರೇಯ, ಸ್ವಾಮಿ ವಿವೇಕಾನಂದರ ಕಥಾಸಂಚಯ ಮುಂತಾದ ಕೃತಿಗಳನ್ನು ರಚಿಸಿದ್ದಾರೆ. ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಶ್ರೀ  ಮಠವೂ ಸೇರಿದಂತೆ ಹಲವಾರು ಮಠಗಳು ಹಾಗೂ ಸಂಘ ಸಂಸ್ಥೆಗಳಲ್ಲಿ ಪ್ರವಚನ ನೀಡುತ್ತಾ ಜನತೆಯಲ್ಲಿ ಧಾರ್ಮಿಕ ಜಾಗೃತಿಯನ್ನುಂಟು ಮಾಡುತ್ತಿದ್ದಾರೆ.

**ಶ್ರೀಮತಿ ಎಂ.ಎ. ನೀಲಾಂಬಿಕಾರವರು** ಖ್ಯಾತ ನಾಟಕಕಾರರಾಗಿದ್ದ ಶ್ರೀ ಅಂಕಪ್ಪನವರ ಸುಪುತ್ರಿ. ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಉತ್ತಮ ಪ್ರವಚನಕಾರರು, ಶರಣ ಸಾಹಿತ್ಯ ಸಂಸ್ಕೃತಿಯ ಬಗ್ಗೆ ಅಪಾರ ಅಭಿಮಾನವುಳ್ಳವರು. ನಲವತ್ತಕ್ಕೂ ಹೆಚ್ಚು ಶರಣ ಸಾಹಿತ್ಯಕ್ಕೆ ಸಂಬಂಧಿಸಿದ ಕೃತಿಗಳನ್ನು ಪ್ರಕಟಿಸಿದ್ದಾರೆ. ಮೈಸೂರು ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಶ್ರೀ ಶಿವರಾತ್ರೀಶ್ವರ ಅಕ್ಕನ ಬಳಗದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಶ್ರೀಮತಿ ಶಕುಂತಲ ಜಯದೇವ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿ, ಗೌರವಗಳಿಗೆ ಭಾಜನರಾಗಿದ್ದಾರೆ.